ದೂರವಾಣಿ ಸಂಖ್ಯೆ : 2419677/2419361
ಫ್ಯಾಕ್ಸ್: 0821-2419363/2419301

e-mail : registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು–570005

ದಿನಾಂಕ: 29.11.2021

ಸಂಖ್ಯೆ:ಎಸಿ7(ಎ)/456/2016-17

## ಸುತ್ತೋಲೆ

ವಿಷಯ: 2021–22ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ಸ್ನಾತಕ ಪದವಿಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಮಾಹಿತಿಯನ್ನು ಸಮಗ್ರ ವಿಶ್ವವಿದ್ಯಾನಿಲಯ **"UUCMS"** ತಂತ್ರಾಂಶದಲ್ಲಿ ದಾಖಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ನಿರ್ದೇಶನ.

******

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ – 2021–22ನೇ **ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಾತಿ ಪಡೆದಿರುವ ಸ್ನಾತಕ ಪದವಿ ವಿದ್ಯಾರ್ಥಿಗಳ ಮಾಹಿತಿಯನ್ನು UUCMS ತಂತ್ರಾಂಶದಲ್ಲಿ ಕಡ್ಡಾಯವಾಗಿ ದಿನಾಂಕ: 30.11.2021ರೊಳಗಾಗಿ ನಮೂದಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ.**

ಮುಂದುವರೆದು, ಪ್ರಸ್ತುತ ಶೈಕ್ಷಣಿಕ ವರ್ಷದಿಂದ ಜಾರಿಗೊಂಡಿರುವ ಸಮಗ್ರ ವಿಶ್ವವಿದ್ಯಾನಿಲಯ ಮತ್ತು ಮಹಾವಿದ್ಯಾಲಯಗಳ ನಿರ್ವಹಣೆ – **UUCMS** ತಂತ್ರಾಂಶದಲ್ಲಿ ದಾಖಲಾಗುವ ಪ್ರತಿ ವಿದ್ಯಾರ್ಥಿಯ ಸಂಪೂರ್ಣ ಮಾಹಿತಿಯು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಇತರೆ ಪ್ರಮುಖ ಇಲಾಖೆಗಳಿಂದ ವಿದ್ಯಾರ್ಥಿಗಳ ನೀಡಲಾಗುವ ವಿದ್ಯಾರ್ಥಿವೇತನ/ಶಿಷ್ಯವೇತನಗಳ **SSP** ಪೋರ್ಟಲ್‌ಗೆ ನೇರ ಸಂಪರ್ಕ ಹೊಂದಿದ್ದು, ತಮ್ಮ ತಮ್ಮ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಕ್ಕೆ ತೊಂದರೆಯುಂಟಾದಲ್ಲಿ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳೇ **ನೇರ ಹೊಣೆಗಾರರಾಗಿರುತ್ತಾರೆಂದು** ಈ ಮೂಲಕ ಸ್ಪಷ್ಟಪಡಿಸಲಾಗಿದೆ.

29/11/2021

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು.

ಗೆ,

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಮೈಸೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಕುಲಸಚಿವರು, (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ನಿರ್ದೇಶಕರು, ಪಿ.ಎಂ.ಇ.ಬಿ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಆಡಳಿತಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಉಪಕುಲಸಚಿವರು/ಸಹಾಯಕ ಕುಲಸಚಿವರು(ಪರೀಕ್ಷಾಂಗ/ಶೈಕ್ಷಣಿಕ/ಅಭಿವೃದ್ಧಿ/ಸಾಮಾನ್ಯ/ಪ್ರಾಧಿಕಾರ/ಪಜಾ:ಪವ ವಿಶೇಷ ಘಟಕ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಮಾನ್ಯ ಕುಲಪತಿಯವರ ವಿಶೇಷಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತಸಹಾಯಕರು, ಮೈ.ವಿ.ವಿ, ಮೈಸೂರು.
11. ಎಲ್ಲಾ ಅಧೀಕ್ಷಕರುಗಳು, ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಎಲ್ಲಾ ಕಾರ್ಯನಿರ್ವಾಹಕರುಗಳು, ಶೈಕ್ಷಣಿಕ 1 ರಿಂದ 9, ಆಡಳಿತ ವಿಭಾಗ, ಮೈ.ವಿ.ವಿ, ಮೈಸೂರು.
13. ರಕ್ಷಾಕಡತಕ್ಕೆ.